# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಚಲನವೈಕಲ್ಯ ಹೊಂದಿರುವ ಮಕ್ಕಳಿರುವ ಸರ್ಕಾರಿ ನೌಕರರಿಗೆ ಪೋಷಣಾ ಭತ್ಯೆಯ ಸೌಲಭ್ಯವನ್ನು ಮಂಜೂರು ಮಾಡುವ ಬಗ್ಗೆ.

**ಪ್ರಸ್ತಾವನೆ:**

2011 ರ ಅಧಿಕಾರಿ ವೇತನ ಸಮಿತಿಯು, ಪೋಷಕರ ಮೇಲೆ ಪೂರ್ಣವಾಗಿ ಅವಲಂಬಿತರಾಗಿರುವ ಮತ್ತು ಶಾಲೆಗಳಿಗೆ ಹೋಗಲು ಅಸಮರ್ಥರಾದ ಚಲನವೈಕಲ್ಯತೆ ಹೊಂದಿರುವ ಮಕ್ಕಳಿರುವ ಸರ್ಕಾರಿ ನೌಕರರಿಗೆ ಅಂತಹ ಮಕ್ಕಳ ಪಾಲನೆ/ಪೋಷಣೆಗಾಗಿ ಒಂದು ಮಗುವಿಗೆ ಮಾಸಿಕ ತಲಾ ರೂ.500/-ಗಳ ದರದಲ್ಲಿ ಗರಿಷ್ಠ ಎರಡು ಮಕ್ಕಳಿಗೆ ಮಾತ್ರ ಪೋಷಣಾ ಭತ್ಯೆಯನ್ನು ಮಂಜೂರು ಮಾಡಲು ಮಾಡಿರುವ ಶಿಫಾರಸ್ಸನ್ನು ಸರ್ಕಾರವು ಪರಿಗಣಿಸಿದೆ ಮತ್ತು ಈ ಕೆಳಕಂಡಂತೆ ಆದೇಶಿಸಿದೆ:

**ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 12 ಎಸ್‌ಆರ್‌ಪಿ 2012 (XII)**
**ಬೆಂಗಳೂರು, ದಿನಾಂಕ 10ನೇ ಜೂನ್ 2013**

ಚಲನವೈಕಲ್ಯತೆ ಮತ್ತು ಅಂಗವಿಕಲತೆಯಿಂದಾಗಿ ಮನೆಯಲ್ಲಿಯೇ ಉಳಿದುಕೊಳ್ಳುವ ಹಾಗೂ ಶಾಲೆಗಳಿಗೆ ಹೋಗಲು ಅಸಮರ್ಥರಾಗಿ ಪೋಷಕರ ಮೇಲೆ ಸಂಪೂರ್ಣವಾಗಿ ಅವಲಂಬಿತರಾಗಿರುವ ಸರ್ಕಾರಿ ನೌಕರರ ಮಕ್ಕಳ ಪಾಲನೆ/ಪೋಷಣೆ ಮಾಡುವುದಕ್ಕಾಗಿ ಒಂದು ಮಗುವಿಗೆ ಮಾಸಿಕ ತಲಾ ರೂ.500/-ಗಳ ದರದಲ್ಲಿ ಗರಿಷ್ಠ ಎರಡು ಮಕ್ಕಳಿಗೆ ಮಾತ್ರ ಪೋಷಣಾ ಭತ್ಯೆಯನ್ನು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಸರ್ಕಾರಿ ನೌಕರರ ಸಂಬಳದಲ್ಲಿ ಸೇರಿಸಿ ನೀಡಲು ಸರ್ಕಾರವು ಹರ್ಷಿಸುತ್ತದೆ :

1. ಅಂಗವಿಕಲ ಪೋಷಣಾ ಭತ್ಯೆಯು, ಸರ್ಕಾರಿ ನೌಕರರ ಶಾಶ್ವತ ಅಂಗವಿಕಲ ಮಕ್ಕಳಿಗೆ ಮಾತ್ರ ಲಭ್ಯವಾಗುತ್ತದೆ.

2. ಸರ್ಕಾರಿ ನೌಕರನ ಮಕ್ಕಳು ದೈಹಿಕ ಅಂಗವಿಕಲತೆಯಿಂದಾಗಿ ಶಾಶ್ವತವಾಗಿ ಶಾಲೆಗೆ ಹೋಗಲು ಅಸಮರ್ಥರಾಗಿರುವ ಬಗ್ಗೆ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದು ಇಲಾಖಾ ಮುಖ್ಯಸ್ಥರಿಗೆ ಸಲ್ಲಿಸತಕ್ಕದ್ದು ಮತ್ತು ಪ್ರಮಾಣ ಪತ್ರವನ್ನು ಇಲಾಖಾ ಮುಖ್ಯಸ್ಥರಿಗೆ ಸಲ್ಲಿಸಿದ ದಿನಾಂಕದಿಂದ ಸರ್ಕಾರಿ ನೌಕರನು ಈ ಭತ್ಯೆಗೆ ಅರ್ಹರಾಗುತ್ತಾರೆ.

18/6/13

Kiran Raghupathi

3. ಸರ್ಕಾರಿ ನೌಕರನ ಅಂಗವಿಕಲ ಮಕ್ಕಳು ಸಂಪೂರ್ಣವಾಗಿ ಅವರ ಮೇಲೆ ಅವಲಂಭಿತರಾಗಿರುವ ಬಗ್ಗೆ ನೌಕರನು ನೀಡುವ ಘೋಷಣೆಯ ಆಧಾರದ ಮೇಲೆ ಈ ಸೌಲಭ್ಯ ನೀಡತಕ್ಕದ್ದು. ಈ ಸೌಲಭ್ಯವನ್ನು ಮಕ್ಕಳು 6 ವರ್ಷ ಪೂರ್ಣಗೊಳಿಸುವ ದಿನಾಂಕದಿಂದ ಲಭ್ಯವಾಗುತ್ತದೆ.

4. ಸರ್ಕಾರಿ ನೌಕರನ ಅಂಗವಿಕಲತೆ ಹೊಂದಿರುವ ಮಕ್ಕಳು ಕೇಂದ್ರ ಅಥವಾ ರಾಜ್ಯ ಸರ್ಕಾರದಿಂದ ಯಾವುದೇ ಪೋಷಣಾ ಭತ್ಯೆ/ ಇತರೆ ಸೌಲಭ್ಯ ಪಡೆಯುತ್ತಿದ್ದಲ್ಲಿ, ಈ ಸೌಲಭ್ಯ ಪಡೆಯಲು ಅರ್ಹರಾಗುವುದಿಲ್ಲ.

5. ಈ ಆದೇಶದನ್ವಯ ಲಭ್ಯವಾಗುವ ಪೋಷಣಾ ಭತ್ಯೆಯನ್ನು ಸರ್ಕಾರಿ ನೌಕರನ ಸಂಬಳದಲ್ಲಿ ಸೇರಿಸತಕ್ಕದ್ದು. ಅಂಗವಿಕಲ ಮಕ್ಕಳ ತಂದೆ ಮತ್ತು ತಾಯಿ, ಇಬ್ಬರೂ ಸರ್ಕಾರಿ ನೌಕರರಾಗಿದ್ದಲ್ಲಿ, ಒಬ್ಬರು ಮಾತ್ರ ಈ ಸೌಲಭ್ಯಕ್ಕೆ ಅರ್ಹರಾಗುತ್ತಾರೆ.

6. ಈ ಪೋಷಣಾ ಭತ್ಯೆಯನ್ನು ಅಂಗವಿಕಲ ಮಕ್ಕಳ ಜೀವಿತ ಅವಧಿಯವರೆಗೆ ಅಥವಾ ಸರ್ಕಾರಿ ನೌಕರನು ಸೇವೆಯಿಂದ ನಿವೃತ್ತರಾಗುವವರೆಗೆ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ನೀಡತಕ್ಕದ್ದು.

ಈ ಆದೇಶದನ್ವಯ, ಪೋಷಣಾ ಭತ್ಯೆಯನ್ನು ಮಂಜೂರು ಮಾಡಲು ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರು ಸಕ್ಷಮ ಪ್ರಾಧಿಕಾರಿಯಾಗಿರುತ್ತಾರೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ**

(ಕೆ.ಎಸ್.ರಾಜಲಕ್ಷ್ಮಿ)
**ಸರ್ಕಾರದ ಅಧೀನ ಕಾರ್ಯದರ್ಶಿ**
**ಆರ್ಥಿಕ ಇಲಾಖೆ (ಸೇವೆಗಳು-2)**

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 300 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು
2. ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
3. ಇಲಾಖಾ ಮುಖ್ಯಾಧಿಕಾರಿಗಳು
4. ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ

Kiran Raghupathi